ದಿನಾಂಕ 16.04.2026 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾದ ಪ್ರಮಾಣವಚನವನ್ನು ಭೋಧಿಸಲಾಯಿತು.

ಪಾಟೀ ಸವಾಲು : 2ನೇ ಎದುರುದಾರರ ಪರ ಶ್ರೀ.ಎಸ್ ವೈ ಎಸ್ ವಕೀಲರಿಂದಃ

ನನಗೆ ಈಗ 32 ವರ್ಷ ವಯಸ್ಸು. ಆಧಾರ್ ಕಾರ್ಡ್ ಮಾಡಿಸಿಕೊಂಡಿದ್ದೇನೆ ಅದನ್ನು ಹಾಜರುಪಡಿಸಲು ತೊಂದರೇ ಇಲ್ಲ. ನಾನು ಕೂಲಿ ಕೆಲಸ ಮಾಡಿಕೊಂಡಿದ್ದೆ. ತಿಂಗಳಿಗೆ 20 ಸಾವಿರ ಸಂಪಾದನೇ ಮಾಡುತ್ತಿದ್ದ ಬಗ್ಗೆ ದಾಖಲೆ ಕೊಟ್ಟಿದ್ದೀರ ಎಂದರೇ ಕೂಲಿ ಕೆಲಸಕ್ಕೆ ದಾಖಲೆ ಇಲ್ಲ. ಈ ವಿಚಾರವಾಗಿ ಸುಳ್ಳು ಹೇಳುತ್ತಿದ್ದೇನೆ ಎಂದರೇ ಸರಿಯಲ್ಲ. ಅಪಘಾತವಾದ ದಿನ ನನ್ನ ಗಾಡಿಯಲ್ಲಿ ಚನ್ನಪಟ್ಟಣದಿಂದ ಊರಿಗೆ ಹೋಗುತ್ತಿದ್ದೆ. ಆ ವಾಹನ ದ ದಾಖಲೆಗಳನ್ನು ಹಾಜರುಪಡಿಸಿದ್ದೀರ ಎಂದರೇ ಹೌದು. ಗಾಡಿ ಚಲಾಯಿಸಲು ಡಿಎಲ್ ಇತ್ತ ಎಂದರೇ ಹೌದು. ಸಾಕ್ಷಿ ತನ್ನ ಜೇಬಿನಲ್ಲಿದ್ದ ಡಿ ಎಲ್ ಪ್ರತಿಯನ್ನು ತೋರಿಸಿರುತ್ತಾರೆ. 2017 ರಲ್ಲಿ ಡಿ ಎಲ್ ಮಾಡಿಸಿಕೊಂಡಿದ್ದೇನೆ. ನನಗೆ ಅಪಘಾತ ಪಡಿಸಿದ ವಾಹನ ಎದುರಿನಿಂದ ಬಂದು ಡಿಕ್ಕಿ ಹೊಡೆದಿರುತ್ತದೆ. ನಾನು ನನ್ನ ವಾಹನವನ್ನು ಅಜಾರುಕತೆಯಿಂದ ಚಲಾಯಿಸಿಕೊಂಡು ಹೋಗುತ್ತಿದದ್ದ ಪರಿಣಾಮ ಅಪಘಾತವಾಗಿದೆ ಎಂದರೇ ಸರಿಯಲ್ಲ. ಅಪಘಾತ ಪಡಿಸಿದವರು ಯಾರು ಮತ್ತು ಎಷ್ಟು ಜನ ಬರುತ್ತಿದ್ದರು ಎಂದು ನಾನು ನೋಡಿರುವುದಿಲ್ಲ. ಆನಂತರ ತಿಳಿದುಕೊಂಡಿದ್ದೀರ ಎಂದರೇ ಇಲ್ಲ.

2. ಅಪಘಾತವನ್ನು ಯಾರಾದರೂ ಪ್ರತ್ಯಕ್ಷವಾಗಿ ನೋಡಿದ್ದಾರ ಎಂದರೇ ಹೌದು. ಅವರನ್ನು ಕರೆದುಕೊಂಡು ಬಂದು ಸಾಕ್ಷಿ ಹೇಳಿಸಲು ತೊಂದರೇ ಇದೆಯಾ ಎಂದರೇ ನನಗೆ ಅವರು ಯಾರು ಎಂದು ಗೊತ್ತಿಲ್ಲ. ಅಜಾಗರುಕತೆಯಿಂದ ನಾನೇ ಬಿದ್ದು ಗಾಯ ಮಾಡಿಕೊಂಡು ಪರಿಹಾರ ಪಡೆಯಲು ವಾಹನವನ್ನು ಸಿಲುಕಿಸಿದ್ದೆವೆ ಎಂದರೇ ಸರಿಯಲ್ಲ. ಆಗಾಗಿ ಅಪಘಾತ ಯಾರು ಪಡಿಸಿದ್ದಾರೆಂದು ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೇ ಸರಿಯಲ್ಲ. ಅಪಘಾತವಾದಾಗ ನಾನು ಚನ್ನಪಟ್ಟಣ ಸರ್ಕಾರಿ ಆಸ್ಪತ್ರೆಗೆ ಹೋಗಿರುತ್ತೇನೆ. ಮೂಳೆ ಮುರಿತ ಆಗಿದೆ ಎಂದರೇ ಹೌದು. ಶಸ್ತ್ರ ಚಿಕಿತ್ಸೆ ಮಾಡಿದ್ದಾರ ಎಂದರೇ ಹೌದು. ಆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೀರ ಎಂದರೇ ಹೌದು. ನಾನು 15 ದಿನ ಒಳರೋಗಿ ಯಾಗಿ ಇದ್ದೆ. ಆ ವಿಚಾರವಾಗಿ ಯಾವುದೇ ದಾಖಲೆ ಹಾಜರುಪಡಿಸಿದ್ದೆ ಇದ್ದರು ಸುಳ್ಳು ಹೇಳುತ್ತಿದ್ದೇನೆ ಎಂದರೇ ಸರಿಯಲ್ಲ. ನಾನು ಏನು ದಾಖಲೆ ಹಾಜರುಪಡಿಸಿದ್ದೇನೆ ಎಂದು ನನಗೆ ಗೊತ್ತು. ಸಾಕ್ಷಿಗೆ ತಾನು

ಹಾಜರುಪಡಿಸಿರುವ ದಾಖಲೆಗಳನ್ನು ತೋರಿಸಿ ಯಾವುದು ಎಂದು ಕೇಳಲಾಗಿ ಸಾಕ್ಷಿ ಗುರುತಿಸಲು ವಿಫಲವಾಗಿರುತ್ತಾರೆ.

3. ಶಸ್ತ್ರ ಚಿಕಿತ್ಸೆ ಮಾಡಿದ ವೈದರನ್ನು ಕರೆದುಕೊಂಡು ಬಂದು ಸಾಕ್ಷಿ ಹೇಳಿಸಲು ತೊಂದರೆ ಇದೆಯಾ ಎಂದರೇ ನನಗೆ ನೆನಪಿಲ್ಲ. ನನ್ನ ಪ್ರಮಾಣ ಪತ್ರದಲ್ಲಿ 3 ಲಕ್ಷ ಖರ್ಚಗಿದೆ ಎಂದು ತಿಳಿಸಿದ್ದು ಅದನ್ನು ಹಾಜರುಪಡಿಸಿಲ್ಲ ಎಂದರೇ ಸರಿಯಲ್ಲ. ಆ ರೀತಿ ಯಾವುದೇ ದಾಖಲೆಗಳು ನ್ಯಾಯಾಲಯದ ಮುಂದೆ ಇಲ್ಲ ಎಂದರೇ ಸರಿಯಲ್ಲ.ಅಪಘಾತಾವಾದ, ಚಿಕಿತ್ಸೆ ಪಡೆದ, ಖರ್ಚಾದ ಬಗ್ಗೆ ಯಾವುದೇ ದಾಖಲೆ ಹಾಜರುಪಡಿಸಿದೆ ಇದ್ದರು ಸುಳ್ಳು ಹೇಳುತ್ತಿದ್ದೇನೆ ಎಂದರೇ ಸರಿಯಲ್ಲ. ಈ ಅಪಘಾತದಿಂದ ಆರ್ಥಿಕ ನಷ್ಟ ಮತ್ತು ದೈಹಿಕ ತೊಂದರೆ ಆಗಿಲ್ಲದೆ ಇದ್ದರು ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೇ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖದ ಮೇರೆಗೆ ಬೆರಳಚ್ಚು ಮಾಡಲಾಯಿತು.)

(ಸಾ.ಓ.ಹೇ.ಕೇ.ಸ.ಇ.ಎ.ಒ)

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಚನ್ನಪಟ್ಟಣ.

ಯಾವುದೇ ದಾಖಲಾತಿಗಳನ್ನು ಗುರುತಿಸಿಕೊಂಡಿರುವುದಿಲ್ಲ.

( ಎದುರುದಾರರು ಮಧ್ಯಂತರ ಅರ್ಜಿ ಒಂದಕ್ಕೆ ತಕರಾರು ಅರ್ಜಿ ಸಲ್ಲಿಸದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುವುದರಿಂದ ಮೂಂದೂಡಲಾಯಿತು.)

( ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿರುವುದರಿಂದ ಮೂಂದೂಡಲಾಯಿತು.)

( ಈ ಹಂತದಲ್ಲಿ ಪ್ರತಿವಾದಿಯ ವಿರುದ್ಧ ಏಕತರ್ಫಿಯ ಆದೇಶ ಮಾಡಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

( ಈ ಹಂತದಲ್ಲಿ ಪ್ರತಿವಾದಿ ಪ್ರತಿವಾದ ಪತ್ರವನ್ನು ಸಲ್ಲಿಸದ ಕಾರಣ ಹಾಗೂ ನ್ಯಾಯಾಲಯದ ಮುಂದೆ ಹಾಜರಾಗದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)